ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ರಾಜ್ಯದಲ್ಲಿರುವ ಸರಕಾರಿ ಪ್ರೌಢಶಾಲೆ/ಪದವಿ ಪೂರ್ವ ಕಾಲೇಜುಗಳಲ್ಲಿರುವ ಅತಿಥಿ ಶಿಕ್ಷಕರು/ಉಪನ್ಯಾಸಕರ ಮಾಹಿತಿ ಕುರಿತು

ಶ್ರೀ ಶಶೀಲ್ ಜಿ. ನಮೋಶಿ(ಶಿಕ್ಷಕರ ಕ್ಷೇತ್ರ) -

14 (77) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರೌಢ ಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿರುವ ಅತಿಥಿ ಶಿಕ್ಷಕರು/ಉಪನ್ಯಾಸಕರ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ಈ ಅತಿಥಿ ಶಿಕ್ಷಕರು/ಉಪನ್ಯಾಸಕರುಗಳಿಗೆ ಸದ್ಯ ಪಾವತಿಸುತ್ತಿರುವ ವೇತನ ಎಷ್ಟು;

(ಇ) ಸದರಿ ಶಿಕ್ಷಕರು/ಉಪನ್ಯಾಸಕರುಗಳಿಗೆ ವೇತನವನ್ನು ಕಾಲಕಾಲಕ್ಕೆ ಪಾವತಿಸಲಾಗುತ್ತಿದೆಯೇ;

(ಈ) ವೇತನವನ್ನು ಪಾವತಿಸದಿದ್ದಲ್ಲಿ ಯಾವ ಕಾರಣಕ್ಕಾಗಿ ಪಾವತಿಸಿಲ್ಲ; ಹಾಗೂ ಈ ಶಿಕ್ಷಕರು/ಉಪನ್ಯಾಸಕರುಗಳಿಗೆ ವೇತನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಉ) ಈಗಾಗಲೇ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಅತಿಥಿ ಉಪನ್ಯಾಸಕರಿಗೆ ಕಳೆದ 5 ತಿಂಗಳ ಬಾಕಿ ವೇತನ ಪಾವತಿಸಿರುವಂತೆ ಸದರಿ ಅತಿಥಿ ಶಿಕ್ಷಕರು/ಉಪನ್ಯಾಸಕರಿಗೂ ಸಹ ಬಾಕಿ ವೇತನವನ್ನು ಯಾವ ಕಾಲಮಿತಿಯೊಳಗೆ ಪಾವತಿಸಲಾಗುವುದು? (ಮಾಹಿತಿ ನೀಡುವುದು)